ಜನದನಿಯ ಸಾರಥಿ
ವಾರ್ತಾ ಭಾರತಿ

# ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನ ನಡೆಸಲು ಸಿಎಂಗೆ ಸಭಾಪತಿ ಹೊರಟ್ಟಿ ಪತ್ರ

**ಬೆಂಗಳೂರು, ಅ.31:** 'ಮುಂಬರುವ ವಿಧಾನ ಮಂಡಲದ ಚಳಿಗಾಲದ ಅಧಿವೇಶನವನ್ನು ನವೆಂಬರ್ ಅಂತ್ಯದಲ್ಲಿ ಅಥವಾ ಡಿಸೆಂಬರ್ ಮೊದಲ ವಾರದಲ್ಲಿ ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ನಡೆಸಬೇಕು ಎಂದು ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರನ್ನು ಆಗ್ರಹಿಸಿದ್ದಾರೆ.



ರವಿವಾರ ಈ ಸಂಬಂಧ ಪತ್ರ ಬರೆದಿರುವ ಬಸವರಾಜ ಹೊರಟ್ಟಿ, ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ವಿಧಾನ ಪರಿಷತ್ತಿಗೆ ಆಯ್ಕೆಯಾಗಿರುವ 25 ಜನ ಸದಸ್ಯರು 2022ರ ಜನವರಿ 5ರಂದು ನಿವೃತ್ತಿ ಹೊಂದಲಿದ್ದಾರೆ. ಈ ಬಾರಿಯ ವಿಧಾನಮಂಡಲದ ಚಳಿಗಾಲದ ಅಧಿವೇಶನವನ್ನು ಬೆಳಗಾವಿಯ ಸುವರ್ಣಸೌಧದಲ್ಲಿ ನಡೆಸುವ ಕುರಿತು ಈಗಾಗಲೇ ಸಿಎಂ ಜೊತೆ ಚರ್ಚಿಸಲಾಗಿದ್ದು, ಅವರು ಅದಕ್ಕೆ ಒಪ್ಪಿಗೆ ಸೂಚಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಈ ಬಾರಿಯ ಚಳಿಗಾಲದ ಅಧಿವೇಶನವನ್ನು ನವೆಂಬರ್ ತಿಂಗಳಾಂತ್ಯದಲ್ಲಿ ಅಥವಾ ಡಿಸೆಂಬರ್ ಮೊದಲ ವಾರದಲ್ಲಿ ಬೆಳಗಾವಿಯಲ್ಲಿ ನಡೆಸಬೇಕು. ಜನವರಿ ಮೊದಲ ವಾರದಲ್ಲಿ ನಿವೃತ್ತಿಗೊಳ್ಳಲಿರುವ 25 ಮಂದಿ ಪರಿಷತ್‌ನ ಸದಸ್ಯರಿಗೆ ಚಳಿಗಾಲದ ಅಧಿವೇಶನದಲ್ಲಿ ಪಾಲ್ಗೊಳ್ಳಲು ಅವಕಾಶ ದೊರೆಯಲಿದ್ದು, ಆದುದರಿಂದ ತಮ್ಮ ಕ್ಷೇತ್ರಗಳಿಗೆ ಸಂಬಂಧಿಸಿದ ಸಮಸ್ಯೆಗಳ ಕುರಿತು ಚರ್ಚೆ ನಡೆಸಿ ಪರಿಹಾರ ಕಂಡುಕೊಳ್ಳಲು ಅವರಿಗೆ ಅನುಕೂಲವಾಗುವುದು. ಈ ನಿಟ್ಟಿನಲ್ಲಿ ಚಳಿಗಾಲದ ಅಧಿವೇಶನ ನಡೆಯುವ ದಿನಾಂಕವನ್ನು ಮೊದಲೇ ಪ್ರಕಟಿಸಬೇಕು ಎಂದು ಅವರು ಕೋರಿದ್ದಾರೆ.

Bengaluru Edition
Nov 1, 2021 Page No.8